# ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ'' ಬೆಂಗಳೂರು-560 001.

ಸಂಖ್ಯೆ: ಪಿಎಸ್ ಸಿ/ 1640/ ಇ(1)/2024-25 ದಿನಾಂಕ:18-09-2024

## ಅಧಿಸೂಚನೆ

ಕರ್ನಾಟಕ ಲೋಕೋಪಯೋಗಿ ಇಲಾಖೆ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2018ರಡಿಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) ಗ್ರೂಪ್ 'ಎ' ವೃಂದದ 30 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಮ ಸಂಖ್ಯೆ | ಇಲಾಖೆಯ ಹೆಸರು | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|---|
| ಗ್ರೂಪ್ –' ಎ' ಹುದ್ದೆಗಳು (ಉಳಿಕೆ ಮೂಲ ವೃಂದ) | | | |
| 1 | ಲೋಕೋಪಯೋಗಿ ಇಲಾಖೆ | ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) (ವೇತನ ಶ್ರೇಣಿ : 83700-155200) | 30 |

2. ಆಯ್ಕೆ ಪ್ರಕ್ರಿಯೆಗೆ ನಿಗದಿಪಡಿಸಿರುವ ಕಾಲಮಿತಿ :

| | |
|---|---|
| ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 03-10-2024 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 04-11-2024 |

- ಸ್ಪರ್ಧಾತ್ಮಕ ಪರೀಕ್ಷಾ ದಿನಾಂಕವನ್ನು ನಂತರದಲ್ಲಿ ತಿಳಿಸಲಾಗುವುದು.
- ಅರ್ಜಿ ಸಲ್ಲಿಸುವುದಕ್ಕೆ ಸಂಬಂಧಿಸಿದಂತೆ ತೊಂದರೆಗಳು ಎದುರಾದಲ್ಲಿ ಅಭ್ಯರ್ಥಿಗಳು ಈ ಕೆಳಕಂಡ ಹೆಲ್ಪ್‌ಲೈನ್ ನಂಬರ್ ಅನ್ನು ಸಂಪರ್ಕಿಸಲು ಸೂಚಿಸಿದೆ.

HELP LINE NO:080-30574957 / 30574901

2.1 ವಿಶೇಷ ಸೂಚನೆ:-

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ವಿಳಾಸ, ಪ್ರವರ್ಗ, ತಂದೆ-ತಾಯಿ ಹೆಸರು, ವಿದ್ಯಾರ್ಹತೆ ಮುಂತಾದ ವಿಷಯಗಳನ್ನು ತಪ್ಪಾಗಿ ನಮೂದಿಸಿರುವುದಾಗಿ ತಿಳಿಸಿ ಸದರಿ ಮಾಹಿತಿಗಳನ್ನು ಬದಲಾವಣೆ ಮಾಡುವಂತೆ ಮನವಿ ಸಲ್ಲಿಸುತ್ತಿರುವ ಹಿನ್ನೆಲೆಯಲ್ಲಿ ಆಯೋಗಕ್ಕೆ ಒಂದು ಬಾರಿ ತಂತ್ರಾಂಶದ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಸದರಿ ಅರ್ಜಿಯಲ್ಲಿನ ಮಾಹಿತಿಗಳನ್ನು ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ ತಂತ್ರಾಂಶದಲ್ಲಿ ಬದಲಾವಣೆ ಮಾಡಲು ಸಾಧ್ಯವಿರದ ಹಿನ್ನೆಲೆಯಲ್ಲಿ ಅಭ್ಯರ್ಥಿಗಳೇ ನೇರವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಮಾಹಿತಿಗಳನ್ನು ಸರಿಪಡಿಸಿ ಅರ್ಜಿ ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಈ ಸಂಬಂಧ ತದನಂತರ ಸಲ್ಲಿಸಲಾಗುವ ಯಾವುದೇ ಕೋರಿಕೆ/ಮನವಿಗಳನ್ನು ಆಯೋಗದಿಂದ ಪುರಸ್ಕರಿಸಲಾಗುವುದಿಲ್ಲ.

**2.2 ವಿಶೇಷ ಸೂಚನೆ:-**

(1) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆ ನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.

(2) ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿಗಳನ್ನು ತಿರಸ್ಕರಿಸಲಾಗುವುದು.

(3) ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರ/ಇತರೆ ಪ್ರಮಾಣ ಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧ-2ರಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು, (ದಾಖಲೆಗಳು ಸ್ಪಷ್ಟವಾಗಿರಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

(4) ಅರ್ಜಿ ಸಲ್ಲಿಸುವ ಸಮಯದಲ್ಲಿ ಮೀಸಲಾತಿಯನ್ನು ಕೋರದೆ ತದನಂತರದಲ್ಲಿ ಮೀಸಲಾತಿಯನ್ನು ಪರಿಗಣಿಸುವಂತೆ ಕೋರಿ ಸಲ್ಲಿಸುವ ಮನವಿ/ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**2.3** ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್/UPI ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ/ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ವಿಶೇಷ ಸೂಚನೆ:** ಸದರಿ ಹುದ್ದೆಗಳಿಗೆ ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳನ್ನು ಅವಶ್ಯಕ ಸಂದರ್ಭಗಳಲ್ಲಿ ಆಯೋಗವು ಪರಿಶೀಲನೆಗೆ ಒಳಪಡಿಸಬಹುದಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು. ಮೂಲ ದಾಖಲೆಗಳ ಪರಿಶೀಲನೆಯ ಸಂದರ್ಭದಲ್ಲಿ ಈಗಾಗಲೇ ಆನ್‌ಲೈನ್ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

## 3. ಅರ್ಜಿ ಸಲ್ಲಿಸುವ ಹಂತಗಳು-

ಒಂದು ಬಾರಿಯ ನೋಂದಣಿ ಪ್ರಕ್ರಿಯೆ (OTR-ONE TIME REGISTRATION)

ಆನ್‌ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂಬುದಾಗಿ ಅರ್ಥೈಸಿಕೊಳ್ಳುವಂತಿಲ್ಲ. ನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, **(OTR-ONE TIME REGISTRATION)** ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅಭ್ಯರ್ಥಿಗಳು Profile Creation/ ರುಜುವಾತುಗಳು ಸೃಷ್ಟಿಸುವ

ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು.ಎಲ್ಲಾ ಸೂಚನೆಗಳನ್ನ ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

1. ಅಭ್ಯರ್ಥಿಗಳು KPSC ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
2. ಹೊಸದಾಗಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲು, ಅರ್ಜಿದಾರರು KPSC ವೆಬ್‌ಸೈಟ್ https://kpsconline.karnataka.gov.in ಗೆ ಭೇಟಿ ನೀಡಬೇಕು ಮತ್ತು ತಮ್ಮನ್ನು ನೋಂದಾಯಿಸಿಕೊಳ್ಳಲು New Registration "ಹೊಸ ನೋಂದಣಿ" ಲಿಂಕ್ ಅನ್ನುಕ್ಲಿಕ್ ಮಾಡಬೇಕು.
3. ನೋಂದಣಿ ಮತ್ತು ಲಾಗಿನ್ ರುಜುವಾತುಗಳನ್ನು ರಚಿಸಲು ನೀವು ಮಾನ್ಯವಾದ ಇ-ಮೇಲ್ ಐಡಿ ಮತ್ತು ಮೊಬೈಲ್ ಸಂಖ್ಯೆ ಯನ್ನು ಹೊಂದಿರುವಿರಿ ಎಂದು ಖಚಿತಪಡಿಸಿಕೊಳ್ಳಿ.
4. ಒಮ್ಮೆ ನೀವು ನೋಂದಾಯಿಸಿದ ಮತ್ತು ಲಾಗಿನ್ ರುಜುವಾತುಗಳನ್ನು (USER ID & PASSWORD) ಪಡೆದ ನಂತರ, "ಅರ್ಜಿದಾರರ ವಿವರಗಳ ನೋಂದಣಿ" (APPLICANT DETAILS REGISTRATION) ಕ್ಲಿಕ್ ಮಾಡುವ ಮೂಲಕ ನಿಮ್ಮ ಸಂಪೂರ್ಣ ಮಾಹಿತಿಯನ್ನು ಭರ್ತಿ ಮಾಡಲು ಮುಂದುವರಿಯಿರಿ.
5. ಅಭ್ಯರ್ಥಿಗಳು ತಮ್ಮ ವಿವರಗಳನ್ನು ಒಮ್ಮೆ ಮಾತ್ರ ಭರ್ತಿ ಮಾಡಬೇಕಾಗುತ್ತದೆ ಮತ್ತು ಈ ವಿವರಗಳನ್ನು ಎಲ್ಲಾ ಭವಿಷ್ಯದ KPSC ಅಧಿಸೂಚನೆಗಳಿಗೆ ಬಳಸಲಾಗುತ್ತದೆ. ಆದ್ದರಿಂದ ನಿಮ್ಮ USER ID ಮತ್ತು Passwordಗಳನ್ನು ಜೋಪಾನವಾಗಿ ಕಾಯ್ದಿಟ್ಟುಕೊಳ್ಳಿ, ನೀವು ನಿಮ್ಮ Loginನಲ್ಲಿ ಮಾತ್ರ ನಿಮ್ಮ ಮಾಹಿತಿಯನ್ನು ನವೀಕರಿಸಬಹುದು.

ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಮೊದಲು ಎಲ್ಲಾ ವಿವರಗಳು ಸರಿಯಾಗಿದೆಯೇ ಎಂದು ಪರಿಶೀಲಿಸಿಕೊಂಡು ಸಲ್ಲಿಸಲು ಸೂಚಿಸಿದೆ. ಸಲ್ಲಿಸಿದ ನಂತರ ವಿವರಗಳನ್ನು ತಪ್ಪಾಗಿ ಸಲ್ಲಿಸಿದ್ದು ಸರಿಪಡಿಸಿಕೊಡುವಂತೆ ಆಯೋಗಕ್ಕೆ ಪತ್ರ ವ್ಯವಹಾರ ಅಥವಾ E-Mail ಮೂಲಕ ಕಳುಹಿಸುವ ಕೋರಿಕೆಯನ್ನು ಪರಿಗಣಿಸಲಾಗುವುದಿಲ್ಲ.

ಸೂಚನೆ:

1. "ವೈಯಕ್ತಿಕ ವಿವರದಲ್ಲಿ" SSLC ಯನ್ನು 2002 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2003 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು SSLC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
2. "ವೈಯಕ್ತಿಕ ವಿವರದಲ್ಲಿ" CBSE ಯನ್ನು2003 ಅಥವಾ ಅದಕ್ಕಿಂತ ಹಿಂದೆ ಹಾಗೂ ICSE/ಇತರೆ ರಾಜ್ಯ ಸರ್ಕಾರದ 10ನೇ ತರಗತಿಯನ್ನು ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2004 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು CBSE ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
3. "ವಿದ್ಯಾರ್ಹತೆಯ ವಿವರದಲ್ಲಿ" PUC ತರಗತಿಯನ್ನು 2007 ಅಥವಾ ಅದಕ್ಕಿಂತ ಹಿಂದೆ ಅಭ್ಯಸಿಸಿದ್ದಲ್ಲಿ ಅಥವಾ ಯಾವುದೇ ಡಾಟಾ ಬಾರದೇ ಇದ್ದಲ್ಲಿ ಸ್ವತಃ ವಿವರಗಳನ್ನು ನಮೂದಿಸುವುದು.

4. PUC ತರಗತಿಯನ್ನು 2008 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು PUC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತದೆ.
5. "ಗುರುತಿನ ಪುರಾವೆ/ವಿವರದಲ್ಲಿ"Aadhaar/Kutumba ID /Ration Card ನ ಸಂಖ್ಯೆಗಳನ್ನು ನಮೂದಿಸಿದಲ್ಲಿ ನಿಮ್ಮ ಖಾಯಂ ವಿಳಾಸದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು.
6. ನಿಮ್ಮಅರ್ಜಿದಾರರ ವಿವರ ಪುಟದಲ್ಲಿಅಗತ್ಯವಿರುವ ಎಲ್ಲಾ ಮಾಹಿತಿಯನ್ನು ಎಚ್ಚರಿಕೆಯಿಂದ ಒದಗಿಸಿ ಮತ್ತು SAVE "ಉಳಿಸು" ಬಟನ್‌ಅನ್ನು ಬಳಸಿಕೊಂಡು ಅದನ್ನು ಉಳಿಸಲು ಖಚಿತಪಡಿಸಿಕೊಳ್ಳಿ.
7. "ಮೀಸಲಾತಿ ವಿವರದಲ್ಲಿ" ನೀವು ಮೀಸಲಾತಿಯನ್ನು ಪಡೆಯಲು ಇಚ್ಚಿಸಿದಲ್ಲಿ ನಿಮ್ಮ ಜಾತಿ ಮೀಸಲಾತಿ / HK ಮೀಸಲಾತಿ ಪ್ರಮಾಣ ಪತ್ರದ RD ಸಂಖ್ಯೆಯನ್ನು ನಮೂದಿಸಿದಲ್ಲಿ API ಮೂಲಕ ವಿವರಗಳನ್ನು ಸ್ವಯಂ ಚಾಲಿತವಾಗಿ ಪಡೆಯಲಾಗುವುದು ಅಥವಾ ಸ್ವತ: ಅಭ್ಯರ್ಥಿಗಳು [Manual Entry] ವಿವರಗಳನ್ನು ದಾಖಲಿಸಲು ಅವಕಾಶ ನೀಡಲಾಗಿರುತ್ತದೆ.
8. ನೀವು ಇತ್ತೀಚಿನ ಪಾಸ್‌ಪೋರ್ಟ್ ಗಾತ್ರದ ಛಾಯಾಚಿತ್ರ ಮತ್ತು ಸಹಿ ಅಪ್‌ಲೋಡ್ ಮಾಡಬೇಕಾಗುತ್ತದೆ. ಛಾಯಾಚಿತ್ರವು 200 ಕೆಬಿ ಮೀರಬಾರದು ಮತ್ತು ಸಹಿ 70 ಕೆಬಿ ಒಳಗೆ ಇರಬೇಕು.

   <u>ಗಮನಿಸಿ:</u> ಕೇವಲ ಸಹಿ ಮತ್ತು ಛಾಯಾಚಿತ್ರ ವನ್ನು JPEG/JPG ಸ್ವರೂಪದಲ್ಲಿಅಪ್‌ಲೋಡ್ ಮಾಡಬೇಕು.

9. <u>ವಿಶೇಷ ಸೂಚನೆ:-</u> ನೀವು ಒಂದು ಬಾರಿ ನೋಂದಣಿ ಪ್ರಕ್ರಿಯೆಯನ್ನು (OTR-ONE TIME REGISTRATION) ಪೂರ್ಣಗೊಳಿಸಿದ ಮಾತ್ರಕ್ಕೆ ಮೇಲೆ ತಿಳಿಸಲಾದ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲಾಗಿದೆ ಎಂದು ಭಾವಿಸತಕ್ಕದ್ದಲ್ಲ. ನಿಮ್ಮ ರುಜುವಾತುಗಳೊಂದಿಗೆ ಲಾಗಿನ್ ಮಾಡಿದ ನಂತರ ಅರ್ಜಿಯನ್ನು ಸಲ್ಲಿಸಲು "Apply to Post" Tab ಅನ್ನು ಕ್ಲಿಕ್ ಮಾಡಿ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿರುತ್ತದೆ.

"KPSC udyoga" ತಂತ್ರಾಂಶದ ಮೂಲಕ ಆಯೋಗದಿಂದ ಅಧಿಸೂಚಿಸಲಾದ ಮೇಲ್ಕಂಡ ಹುದ್ದೆಗೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ಸೂಚನೆಗಳು:

Instructions for Candidates to Apply Online for above Notified Post through KPSC Udyoga Software:

1. ನಿಮ್ಮ ರುಜುವಾತುಗಳೊಂದಿಗೆ ಲಾಗ್‌ಇನ್ ಮಾಡಿದ ನಂತರ, ನೀವು ಸಕ್ರಿಯ ಅಧಿಸೂಚನೆಗಳನ್ನು ನೋಡುತ್ತೀರಿ. ಅರ್ಜಿಸಲ್ಲಿಸಲು " Apply to Post " Tab ಅನ್ನು ಕ್ಲಿಕ್ ಮಾಡಿ.
2. "Apply Post" ಲಿಂಕ್ ಅನ್ನು ಕ್ಲಿಕ್ ಮಾಡುವುದರಿಂದ ನೀವು ಅಧಿಸೂಚನೆಯ ಪ್ರಕಾರ ಅರ್ಹತಾ ಮಾನದಂಡಗಳನ್ನು ಪೂರೈಸಿದ್ದೀರಾ ಎಂದು ತಂತ್ರಾಂಶವು ಪರಿಶೀಲಿಸುತ್ತದೆ. ನೀವು ಅನರ್ಹರಾಗಿದ್ದರೆ, ಸಿಸ್ಟಮ್ ಮುಕ್ತವಾದ ಸಂದೇಶವನ್ನು ಪ್ರದರ್ಶಿಸುತ್ತದೆ.
3. ಅರ್ಹತಾ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಗೆ ಮಾತ್ರ ಅವರ ಅರ್ಜಿಯನ್ನು ಮುಂದುವರಿಸಲು ತಂತ್ರಾಂಶವು ಅನುಮತಿಸುತ್ತದೆ. ಅಭ್ಯರ್ಥಿಗಳು Notification ಅನ್ನು ಪೂರ್ಣವಾಗಿ ಓದಿ ತಮ್ಮ ಅರ್ಹತೆ ಬಗ್ಗೆ ಮನದಟ್ಟು ಮಾಡಿಕೊಂಡ ನಂತರವೇ ಅರ್ಜಿ ಹಾಕಬೇಕು ಮತ್ತು ಶುಲ್ಕವನ್ನು ತುಂಬಬೇಕು.

4. ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು, ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ. ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಸಲ್ಲಿಸಲಾದ ಅರ್ಜಿಯಲ್ಲಿನ ವಿವರಗಳನ್ನು ಮತ್ತೊಮ್ಮೆ ಬದಲಾವಣೆ ಮಾಡಲು ಬಯಸಿದಲ್ಲಿ "Applied Post" Tab ನಲ್ಲಿ ಸಲ್ಲಿಸಲಾದ ಹುದ್ದೆಯ ಅರ್ಜಿಯನ್ನು "Delete" ಮಾಡಿ ಮತ್ತೊಮ್ಮೆ OTR ಅರ್ಜಿಯಲ್ಲಿನ ವಿವರಗಳನ್ನು ಬದಲಾಯಿಸಿಕೊಂಡು ಹೊಸ ಅರ್ಜಿಯನ್ನು ಸಲ್ಲಿಸಬಹುದು. ಆದರೆ Delete ಮಾಡಿದ ಹುದ್ದೆಗೆ ಈಗಾಗಲೇ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಕ್ಕೂ ಸರಿದೂಗಿಸುವ ಅಥವಾ ಹಿಂದಿರುಗಿಸುವ ಅವಕಾಶವಿರುವುದಿಲ್ಲ.
5. ನಿರ್ದಿಷ್ಟ ಅಧಿಸೂಚನೆಗಾಗಿ ಅರ್ಜಿ ಶುಲ್ಕವನ್ನು ಪಾವತಿಸಲು ವಿಫಲವಾದರೆ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ. SC/ST/CAT-1/ದೈಹಿಕ ಅಂಗವಿಕಲ ಅಭ್ಯರ್ಥಿಗಳಿಗೆ ಯಾವುದೇ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ.
6. ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:
   - ನೆಟ್ ಬ್ಯಾಂಕಿಂಗ್
   - ಡೆಬಿಟ್ ಕಾರ್ಡ್
   - ಕ್ರೆಡಿಟ್ ಕಾರ್ಡ್
   - UPI
7. ಶುಲ್ಕವನ್ನು ಪಾವತಿಸಲು ಕೆಳಗಿನ ವಿಧಾನವನ್ನು ಅನುಸರಿಸಿ:
   - ಹಂತ 1: ನೀವು ಅರ್ಜಿ ಸಲ್ಲಿಸಲು ಬಯಸುವ ನಿರ್ದಿಷ್ಟ ಅಧಿಸೂಚನೆಗಾಗಿ " APPLY Post" ಲಿಂಕ್‌ಅನ್ನು ಕ್ಲಿಕ್ ಮಾಡಿ
   - ಹಂತ 2: ಆಯ್ಕೆಮಾಡಿದ ಅಧಿಸೂಚನೆಗಾಗಿ ಅಪ್ಲಿಕೇಶನ್ ಅನ್ನು ಪರಿಶೀಲಿಸಿ.
   - ಹಂತ 3: "Pay Now" ಬಟನ್ ಅನ್ನು ಕ್ಲಿಕ್ ಮಾಡಿ, ಅದು ನಿಮ್ಮನ್ನು ಪಾವತಿ ಪರದೆಗೆ ಮರು ನಿರ್ದೇಶಿಸುತ್ತದೆ. ಅಲ್ಲಿ ನೀವು UPI, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಮತ್ತು ನೆಟ್ ಬ್ಯಾಂಕಿಂಗ್ ಗಳ ಮೂಲಕ ಪಾವತಿಸಲು ಆಯ್ಕೆ ಮಾಡಬಹುದು.
   - ಹಂತ 4: ಯಶಸ್ವಿಯಾಗಿ ಪಾವತಿಯಾದಲ್ಲಿ, ಪಾವತಿಯ ಯಶಸ್ಸನ್ನು ದೃಢೀಕರಿಸುವ ಮೂಲಕ ನಿಮ್ಮನ್ನು KPSC Udyoga software ಗೆ ಮರು ನಿರ್ದೇಶಿಸಲಾಗುತ್ತದೆ.
   - ಹಂತ 5: ನೀವು " Applied Post " ಗ್ರಿಡ್‌ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಬಹುದು.
   - ಹಂತ 6: ಪಾವತಿ ವಹಿವಾಟು ವಿಫಲವಾದಲ್ಲಿ, Applied Post ವಿಭಾಗದಲ್ಲಿ "Re-Payment" ಲಿಂಕ್ ಅನ್ನು ಕ್ಲಿಕ್ ಮಾಡಿ ಮತ್ತು ಹಂತ 3 ಅನ್ನು ಪುನರಾವರ್ತಿಸಿ.
8. ಪಾವತಿ ವಹಿವಾಟು ಮಾಡುವ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ Browser Close / Refresh or Back button Pressನ್ನು ಮಾಡಬಾರದು. ಪಾವತಿ ಮಾಡುವ ಸಂದರ್ಭದಲ್ಲಿ Processing / Pending ಬಂದಲ್ಲಿ, ಅಭ್ಯರ್ಥಿಗಳು Payment Complete ಆಗುವವರೆಗೆ ಕಾಯಲು ಸೂಚಿಸಿದೆ. ಇದರ ಬಗ್ಗೆ ಆಯೋಗವನ್ನು ಸಂಪರ್ಕಿಸುವ /ಮೇಲ್ ಅಥವಾ ಮಾಹಿತಿ ಕೇಳುವ ಅವಕಾಶವಿರುವುದಿಲ್ಲ.
9. ಆಯೋಗದ ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ ಆಯೋಗವು ಪರೀಕ್ಷೆಯನ್ನು ನಿಗದಿಪಡಿಸಿದಾಗ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ನೀವು ಸೂಚನೆಯನ್ನು SMS ಮೂಲಕ ಸ್ವೀಕರಿಸುತ್ತೀರಿ.

3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಉ.ಮೂ.ವೃ | ಉಳಿಕೆ ಮೂಲ ವೃಂದ | RPC | Residual Parent Cadre |
| ತೃ.ಲಿ | ತೃತೀಯ ಲಿಂಗ | TG | Transgender |

4. ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

4.1 ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 5. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |
| (ಉ) | ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ಖಾಯಂ ಆಗಿ ಡಿಬಾರ್ ಆದ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ |
| (ಊ) | ಯಾವುದೇ ನೈತಿಕ ಪರಿಭಾಷೆಗೆ ಶಿಕ್ಷೆಗೆ ಒಳಪಟ್ಟ ವ್ಯಕ್ತಿ ಅಥವಾ ಕೇಂದ್ರ ಅಥವಾ ಕರ್ನಾಟಕ ಅಥವಾ ಇತರೆ ರಾಜ್ಯದ ಲೋಕ ಸೇವಾ ಆಯೋಗದಿಂದ ನಡೆಸಲಾಗುವ ಪರೀಕ್ಷೆಗಳಿಂದ ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು, ಸರ್ಕಾರವು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ, ನೇಮಕಾತಿಗೆ ಅರ್ಹರಾಗುವುದಿಲ್ಲ. |

ಕಂಡಿಕೆ 05ರಲ್ಲಿ ತಿಳಿಸಿರುವ ಅರ್ಹತಾ ಷರತ್ತುಗಳ ಜೊತೆಗೆ ಈ ಕೆಳಕಂಡ ನಿಗದಿತ ಶೈಕ್ಷಣಿಕ ಅರ್ಹತೆಯನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

### 5.1. ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) ಹುದ್ದೆಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆ:-

Must be a holder of Degree in Civil Engineering or Construction Technology and Management or Building and Construction Technology or Civil Engineering and Planning or Civil Technology or Construction Technology or Construction Engineering and Management or Geomechanics and Structures or Structural and Foundation Engineering or Structural Engineering and Construction granted by a University established by law in India recognized by AICTE, New Delhi or a Dipoma Certificate granted by the Institution of Engineers (India) that he has passed Parts A and B of the Associate Membership Examination of the Institution of Engineers (India) in Civil Engineering or Construction Technology and Management Engineering.

**5.2 ನೇಮಕಾತಿ ವಿಧಾನ:** ಕರ್ನಾಟಕ ಲೋಕೋಪಯೋಗಿ ಇಲಾಖೆ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2018ರಲ್ಲಿ ಗ್ರೂಪ್-ಎ ವೃಂದದ ಹುದ್ದೆಗಳ ನೇಮಕಾತಿಯು ಲಿಖಿತ ಪರೀಕ್ಷೆ (Writtern Exam) ಮತ್ತು ವ್ಯಕ್ತಿತ್ವ ಪರೀಕ್ಷೆ (Personality Test) ಗಳು ಸೇರಿದಂತೆ 02 ಹಂತಗಳನ್ನು ಒಳಗೊಂಡಿದ್ದು, ವಿವರಗಳು ಈ ಕೆಳಕಂಡಂತಿವೆ;

| | |
|---|---|
| ಸ್ಪರ್ಧಾತ್ಮಕ ಪರೀಕ್ಷೆಯು ;<br><br>(ಎ) ಅನುಬಂಧದಲ್ಲಿ ನಿರ್ದಿಷ್ಟಪಡಿಸಿರುವಂತೆ ಕನ್ನಡ, ಇಂಗ್ಲಿಷ್, ಸಾಮಾನ್ಯ ಜ್ಞಾನ ಮತ್ತು ತಾಂತ್ರಿಕ ವಿಷಯಗಳ ಲಿಖಿತ ಪರೀಕ್ಷೆ;<br><br>ಮತ್ತು<br><br>(ಬಿ) ವ್ಯಕ್ತಿತ್ವ ಪರೀಕ್ಷೆಯನ್ನು ಒಳಗೊಂಡಿರುತ್ತದೆ.<br><br>ವ್ಯಕ್ತಿತ್ವ ಪರೀಕ್ಷೆಯ ಗರಿಷ್ಠ ಅಂಕಗಳು ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಅಂಕಗಳ 5% ಮೀರಬಾರದು. | The Competetive Examination shall consist of-<br>(a) A written examination in Kannada, English, general Knowledge and Technical subjects specified in the Annexure; and<br>(b) Personality test.<br><br>The maximum marks for personality test shall not exceed 5% of the marks fixed for competitive examination. |
| <u>ವ್ಯಕ್ತಿತ್ವ ಪರೀಕ್ಷೆಗೆ ಅಭ್ಯರ್ಥಿಗಳ ಅರ್ಹತೆ:-</u><br><br>ಆಯೋಗವು ಮುಕ್ತ ಸ್ಪರ್ಧೆ ಮತ್ತು ಸೇವಾನಿರತ ಸ್ಪರ್ಧೆಗೆ, ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಜೇಷ್ಠತೆಯ ಆಧಾರದ ಮೇಲೆ ಅಭ್ಯರ್ಥಿಗಳ ಪ್ರತ್ಯೇಕ ಪಟ್ಟಿಯನ್ನು ಸಿದ್ಧಪಡಿಸಬೇಕು. ಸದರಿ ಪಟ್ಟಿಗಳಲ್ಲಿರುವ ಅಭ್ಯರ್ಥಿಗಳನ್ನು ಅಧಿಸೂಚಿಸಲಾದ ಖಾಲಿ ಹುದ್ದೆಗಳಿಗೆ ಅನುಗುಣವಾಗಿ 1:5ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಕರೆಯಬೇಕಿರುತ್ತದೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳನ್ನು ಸದರಿ ವರ್ಗಗಳಿಗೆ ಮೀಸಲಿರಿಸಿದ ಹುದ್ದೆಗಳಿಗನುಗುಣವಾಗಿ ಅದೇ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಕರೆಯಬೇಕಿರುತ್ತದೆ. | <u>Eligibility of Candidates for personality test:-</u><br>The Commission shall prepare a separate list of candidates under open competition and in-service competition in the order of merit on the basis of the results of the competitive examination. From among the candidates whose names are included in such list, as far as may be, such number of candidates as is equal to five times the number of vacancies notified shall be called for personality test subject to calling candidates belonging to Scheduled Castes, Scheduled Tribes and Other Backward Classes in the same ratio as the vacancies are reserved for them. |

## ಲಿಖಿತ ಪರೀಕ್ಷೆ/ Written Examination:-

ಲಿಖಿತ ಪರೀಕ್ಷೆಯಲ್ಲಿ ಕರ್ನಾಟಕ ಲೋಕೋಪಯೋಗಿ ಇಲಾಖೆ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು 2018ರ ಷೆಡ್ಯೂಲ್-2ರ Annexure ನಲ್ಲಿ ಕೆಳಕಂಡ ಪತ್ರಿಕೆಗಳನ್ನು ನಿರ್ದಿಷ್ಟಪಡಿಸಲಾಗಿದ್ದು, ವಿವರಗಳು ಕೆಳಕಂಡಂತಿದೆ.

<table>
<tr><th colspan="2">ಪತ್ರಿಕೆಗಳು/Papers</th><th>ವಿಷಯ/Subject</th><th>ಅಂಕಗಳು/ marks</th><th>ಅವಧಿ Duration (ಗಂಟೆಗಳು/ hours)</th></tr>
<tr><td colspan="2" rowspan="2">ಅರ್ಹತಾದಾಯಕ ಪತ್ರಿಕೆಗಳು/ Qualifying Papers</td><td>ಕನ್ನಡ / Kannada</td><td>100</td><td>1 ½</td></tr>
<tr><td>ಇಂಗ್ಲೀಷ್ /English</td><td>100</td><td>1 ½</td></tr>
<tr><td rowspan="5">ಕಡ್ಡಾಯ ಪತ್ರಿಕೆಗಳು / Compulsory Papers</td><td>ಪತ್ರಿಕೆ -1/ Paper-1</td><td>ಸಾಮಾನ್ಯ ಜ್ಞಾನ/General Knowledge</td><td>100</td><td>1 ½</td></tr>
<tr><td>ಪತ್ರಿಕೆ -2 / Paper -2</td><td>ತಾಂತ್ರಿಕ ವಿಷಯ ಪತ್ರಿಕೆ -1<br>Technical subject Paper-1</td><td>100</td><td>3</td></tr>
<tr><td>ಪತ್ರಿಕೆ -3 / Paper -3</td><td>ತಾಂತ್ರಿಕ ವಿಷಯ ಪತ್ರಿಕೆ -2<br>Technical subject Paper-2</td><td>100</td><td>3</td></tr>
<tr><td>ಪತ್ರಿಕೆ -4 / Paper -4</td><td>ತಾಂತ್ರಿಕ ವಿಷಯ ಪತ್ರಿಕೆ -3<br>Technical subject Paper-3</td><td>100</td><td>3</td></tr>
<tr><td>ಪತ್ರಿಕೆ -5 / Paper -5</td><td>ತಾಂತ್ರಿಕ ವಿಷಯ ಪತ್ರಿಕೆ -4<br>Technical subject Paper-4</td><td>100</td><td>3</td></tr>
<tr><td colspan="3">ಲಿಖಿತ ಪರೀಕ್ಷೆಯ ಒಟ್ಟು ಅಂಕಗಳು /Total marks for the written examination</td><td>500</td><td></td></tr>
<tr><td colspan="5">* ವ್ಯಕ್ತಿತ್ವ ಪರೀಕ್ಷೆಯ ಗರಿಷ್ಠ ಅಂಕಗಳು ಸ್ಪರ್ಧಾತ್ಮಕ ಪರೀಕ್ಷೆ (ಲಿಖಿತ ಪರೀಕ್ಷೆ)ಗೆ ನಿಗದಿಪಡಿಸಿದ ಅಂಕಗಳ 5% (25 ಅಂಕಗಳು) ಮೀರಬಾರದು. (The maximum marks for personality test shall not exceed 5% (25 marks) of the marks fixed for competitive examination.)</td></tr>
</table>

### ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿ:-

ಆಯೋಗವು ಮುಕ್ತ ಸ್ಪರ್ಧೆ (ಶೇಕಡಾ 20ರಷ್ಟು ಕೋಟಾ) ಮತ್ತು ಸೇವಾನಿರತ ಸ್ಪರ್ಧೆಯ (ಶೇಕಡಾ 05ರಷ್ಟು ಕೋಟಾ) ಕ್ರೋಢೀಕೃತ ಆಯ್ಕೆಪಟ್ಟಿಯನ್ನು ಅಭ್ಯರ್ಥಿಗಳು ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಗಳಲ್ಲಿ ಗಳಿಸಿದ ಒಟ್ಟು ಅಂಕಗಳ ಜೇಷ್ಠತೆಯ ಆಧಾರದ ಮೇಲೆ ಹಾಗೂ

### List of selected candidates:-

The Commission shall prepare in the order of merit a combined select list of candidates comprising of candidates selected from open competition (twenty percent Quota) and from in-service

| | |
|---|---|
| ಚಾಲ್ತಿಯಲ್ಲಿರುವ ಮೀಸಲಾತಿಯನ್ವಯ ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಮೀಸಲಾತಿಗೆ ಅನುಗುಣವಾಗಿ ಸಿದ್ಧಪಡಿಸಬೇಕು.<br><br>ಸ್ಪರ್ಧಾತ್ಮಕ ಪರೀಕ್ಷೆಯು ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನು ಒಳಗೊಂಡಿರುತ್ತದೆ. ಅಭ್ಯರ್ಥಿಗಳು ಕನ್ನಡ ಭಾಷೆಯ ಪತ್ರಿಕೆಯನ್ನು ಹೊರತುಪಡಿಸಿ ಎಲ್ಲಾ ಪ್ರಶ್ನೆ ಪತ್ರಿಕೆಗಳಿಗೆ ತಮ್ಮ ಕೈಯಲ್ಲಿ ಇಂಗ್ಲಿಷ್‌ನಲ್ಲಿ ಉತ್ತರಿಸಬೇಕು. | competition (five percent quota) on the basis of the aggregate of the marks secured in the written examination and personality test and after taking into consideration the rules and orders in force relating to reservation of posts for Scheduled Castes, Scheduled Tribes, other Backward Classes and others.<br><br>The competitive examination shall consist of written examination and personality test. Candidates shall answer all question papers, except Kannada language paper, in English in their own hand. |
| ಕಡ್ಡಾಯ ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳಲ್ಲಿ ಪಡೆದ ಅಂಕಗಳು ಅರ್ಹತಾದಾಯಕ ಸ್ವರೂಪದ್ದಾಗಿರುತ್ತದೆ. ಸದರಿ ಪತ್ರಿಕೆಗಳಲ್ಲಿ ಅರ್ಹತೆ ಪಡೆಯಲು ಪ್ರತಿಯೊಂದು ಪತ್ರಿಕೆಯಲ್ಲಿ ಕನಿಷ್ಠ ಶೇಕಡ 30 ಮತ್ತು ಒಟ್ಟು ಶೇಕಡ (aggregate) 35 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಅರ್ಹತಾದಾಯಕ ಪತ್ರಿಕೆಗಳಾದ ಕಡ್ಡಾಯ ಕನ್ನಡ ಮತ್ತು ಕಡ್ಡಾಯ ಇಂಗ್ಲೀಷ್ ಪತ್ರಿಕೆಗಳಲ್ಲಿ ನಿಗದಿತ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ವ್ಯಕ್ತಿತ್ವ ಪರೀಕ್ಷೆ ಮತ್ತು ಆಯ್ಕೆಗೆ ಅರ್ಹರಾಗುವುದಿಲ್ಲ. | The marks obtained in compulsory papers i.e. in English and in Kannada shall be of qualifying nature. For qualifying in these papers, a minimum of 30% in each paper and 35% aggregate is prescribed. The marks obtained in these two papers shall not be considered for determining the merit for selction. Candidates who do not secure the prescribed marks in the qualification papers, namely, Kannada and English, shall not be eligible for personality test and selection. |

| | |
|---|---|
| ಪ್ರತಿ ತಾಂತ್ರಿಕ ವಿಷಯದ ಪತ್ರಿಕೆಯು 03 ಭಾಗಗಳನ್ನು ಮತ್ತು ಪ್ರತಿ ಭಾಗವು 03 ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಅದರ ಪ್ರಕಾರ ಎಲ್ಲಾ 03 ಭಾಗಗಳಿಂದ ಪ್ರತಿ ಪತ್ರಿಕೆಯು ಒಟ್ಟು 09 ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಅಭ್ಯರ್ಥಿಯು ಪ್ರತಿ ಭಾಗದಿಂದ ಕನಿಷ್ಠ 01 ಪ್ರಶ್ನೆಯನ್ನು ಆಯ್ಕೆ ಮಾಡುವುದರ ಮೂಲಕ ಒಟ್ಟು 09 ಪ್ರಶ್ನೆಗಳಲ್ಲಿ 05 ಪ್ರಶ್ನೆಗಳಿಗೆ ಉತ್ತರಿಸಬೇಕು. | Every Technical subject paper consist of 03 Parts and 03 Questions from every part and accordingly total each paper consist of Total 09 questions from all the 03 Parts. Candidate has to answer any 05 questions out of 09 Questions subject to selection of minimum 01 question from each Part. |
| 20 ಅಂಕಗಳಿರುವ ಪ್ರತಿಯೊಂದು ಪ್ರಶ್ನೆಯು ಒಂದು ಪ್ರಶ್ನೆ ಅಥವಾ ಪ್ರಶ್ನೆಗಳ ಗುಂಪನ್ನು ಹೊಂದಿರಬಹುದು. | Every Question with 20 marks can have either single question or group of questions. |

**5.3 <u>ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-</u>**

ಸ್ಪರ್ಧಾತ್ಮಕ ಪರೀಕ್ಷೆ (Written Exam)ಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು.

5.4 <u>ವಯೋಮಿತಿ:-</u>

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | | |
|---|---|---|
| ಕನಿಷ್ಠ | | 21 ವರ್ಷ |
| ಗರಿಷ್ಠ | 1. ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು |
| | 2. ಪ್ರವರ್ಗ 2ಎ/2ಬಿ/3ಎ/3ಬಿಅಭ್ಯರ್ಥಿಗಳಿಗೆ | 38 ವರ್ಷಗಳು |
| | 3. ಪರಿಶಿಷ್ಟ ಜಾತಿ/ಪರಿಶಿಷ್ಟಪಂಗಡ/ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷಗಳು |

<u>5.5 ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.</u>

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮನದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದೇ ಕಡಿಮೆಯೋ ಅಷ್ಟು ವರ್ಷಗಳು. |

| | | |
|---|---|---|
| | ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | |
| (ಆ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |
| (ಇ) | National Cadet Corpsನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ<br>{ಅಂಗವಿಕಲ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 104 ಸೇನೆನಿ 2005 ದಿನಾಂಕ 13-09-2005 ರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 115 ಸೇನೆನಿ 2005, ದಿನಾಂಕ 19-11-2005 ರಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು (ಈ ಪ್ರಮಾಣಪತ್ರದ ನಮೂನೆಯನ್ನು ಅನುಬಂಧ-2 ರಲ್ಲಿ ತೋರಿಸಲಾಗಿದೆ.) | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳು | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |

| | | |
|---|---|---|
| (ಐ) | ವಿಧವೆಯಾಗಿದ್ದಲ್ಲಿ (ವಿಧವೆಯರು "ವಿಧವೆ" ಎಂಬ ಬಗ್ಗೆ ತಹಸೀಲ್ದಾರ್ ಕಛೇರಿಯಿಂದ ಪಡೆದ ಮೃತರ ಕುಟುಂಬದ ಜೀವಂತ ಸದಸ್ಯರ ದೃಢೀಕರಣ ಪ್ರಮಾಣ ಪತ್ರವನ್ನು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| (ಐ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |

## 6. ಹುದ್ದೆಗಳ ವರ್ಗೀಕರಣ:

### ಉಳಿಕೆ ಮೂಲ ವೃಂದದ ವರ್ಗೀಕರಣ ಪಟ್ಟಿ – ಒಟ್ಟು ಹುದ್ದೆಗಳು-30

### ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) ಗ್ರೂಪ್ -ಎ

### Assistant Executive Engineer (Grade-1) GROUP-A

| ಮೀಸಲಾತಿ ವರ್ಗ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಅಂ.ವಿ. | ಕ.ಮಾ.ಅ | ಒಟ್ಟು |
|---|---|---|---|---|---|---|---|
| ಸಾಮಾನ್ಯ ವರ್ಗ | 2 | 5 | 4 | 1 | 1* | 1 | 14 |
| ಪರಿಶಿಷ್ಟ ಜಾತಿ | 1 | 2 | 1 | 0 | 1* | 0 | 5 |
| ಪರಿಶಿಷ್ಟ ಪಂಗಡ | 1 | 1 | 0 | 0 | 0 | 0 | 2 |
| ಪ್ರವರ್ಗ-1 | 1 | 0 | 0 | 0 | 0 | 0 | 1 |
| ಪ್ರವರ್ಗ-2ಎ | 1 | 2 | 1 | 0 | 1* | 0 | 5 |
| ಪ್ರವರ್ಗ-2ಬಿ | 1 | 0 | 0 | 0 | 0 | 0 | 1 |
| ಪ್ರವರ್ಗ-3ಎ | 1 | 0 | 0 | 0 | 0 | 0 | 1 |
| ಪ್ರವರ್ಗ-3ಬಿ | 1 | 0 | 0 | 0 | 0 | 0 | 1 |
| ಒಟ್ಟು | 9 | 10 | 6 | 1 | 3* | 1 | 30 |

**Note: * LV- Low Vision**

---

## GOVERNMENT OF KARNATAKA

No.WCD 118 PHP 2020

Karnataka Government Secretariat,
Multi Storyed Building,
Bangalore, Dated:13-01-2022.

## NOTIFICATION

In exercise of the powers conferred under Sub-section (1) of section 34 of the Rights of Person with Disablities Act 2016, the Government of Karnataka hereby identifies the post specified in the Schedule -I in respect of the category ‘A Posts of the Persons with disabilities in Public Works Department.

### SCHEDULE-I

| Sl No. | Nomenclature of the Post | Categories of disabilities identified by Expert Committee in the meeting |
|---|---|---|
| (1) | (2) | (5) |
| 1. | Assistant Executive Engineer (Division-1) Group A | a) LV<br>b) D, HH<br>c) OA, OL, BA, BL, OAL, Aav, Dw, LC<br>d) SLD, MI<br>e) MD involving (a) to (d) above |

Issued as per DPAR Services Rules-1 vide Order No. DPAR 149 SRR 2020 Dated:25-09-2020.

(a,b,c,d,e, abbreviation {a} blindness and low vision; {b} deaf and hard of hearing {c} locomotor disability including cerebral palsy, leprosy cured, dwarfism, acid attack victims and muscular dystrophy; {d} actism intettecrual disability, specific learing disability and mental illness; {e} multiple diabilities from amongst persons under clauses {a} to {d} including deaf-blindness in the posts indentified for each disabilities).

By order and in the name of the Governor of Karnataka,

sd/-
Under Secretary to Government-2,
Department of Women and Child Development and Empowerment of Differently Abled and Senior Citizens.

**ವಿಶೇಷ ಸೂಚನೆ:-** ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಗ್ರೇಡ್-1) ಹುದ್ದೆಗಳಿಗೆ ಸಂಬಂಧಿಸಿದಂತೆ, ಸಂಬಂಧಿತ ಇಲಾಖೆಯವರು ಅಂಗವಿಕಲ ಅಭ್ಯರ್ಥಿಗಳಿಗೆ ನಿಯಮಾನುಸಾರ ಷೆಡ್ಯೂಲ್‌ನಲ್ಲಿ ಗುರುತಿಸಿರುವ ಅಂಗವೈಕಲ್ಯತೆ (Disability)ಅನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಮೇಲ್ಕಂಡ ಅಧಿಸೂಚನೆಯಲ್ಲಿ ನೀಡಲಾಗಿರುತ್ತದೆ. ಸದರಿ ಷೆಡ್ಯೂಲ್‌ನಲ್ಲಿ ಗುರುತಿಸಿರುವ ಅಂಗವೈಕಲ್ಯತೆ(Disability)ಗಳನ್ನು ಹೊರತುಪಡಿಸಿ, ಇನ್ನಿತರೆ ಯಾವುದೇ ಅಂಗವೈಕಲ್ಯತೆ(Disability) ಹೊಂದಿದ ಅಭ್ಯರ್ಥಿಗಳನ್ನು ಅಧಿಸೂಚಿಸಲಾದ ಹುದ್ದೆಗಳ ಆಯ್ಕೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

## 7. SYLLABUS

English-(1):- English paper will be of S.S.L.C. level and comprises of comprehension of given passage, precise writing, usage, vocabulary, short essay, communication skills. For short essay a choice of subjects will be given. Candidates are expected to keep close to the subject of the essay; to arrange their ideas in orderly fashion and to write concisely. Passages will be set for summary or precise. Credit will be given for effective and exact expression.

Kannada-(2):- Kannada paper will be of S.S.L.C. level and comprises of comprehension of given passage, precise writing, usage, vocabulary, short essay, translation from English to Kannada. For short essay a choice of subjects will be given. Candidates are expected to keep close to the subject of the essay, to arrange their ideas in orderly fashion and to write Passages will be set for summary or precise. Credit will be given for effective and exact expression.

General Knowledge-(2) Including General Knowledge of current events and of such matters of every day observation and experience in their scientific aspects as may be expected of an educated person who has not made a special study of any scientific subjects. The papers will also include questions of Indian History and Geography of a nature which candidates should be able to answer without special study.

### TECHNICAL SUBJECTS

### Paper-1

### Part-A: TRANSPORTATION ENGINEERING

Introduction and Terminology, Principles of transportation engneering, Vehicular and road user characteristics, traffic studies, junctions and signals, traffic control devices; Highwary alignment and geometric design; Design of flexible and rigid pavements; Highwary maintenance, highway drainage.

Design of Bridges: IRC loading, Critical loading conditions, Design of RCC deck slabs, Rcc longitudinal and cross girders.

## Part-B: RAILWAYS AND TUNNELS

Railways Introduction, Rails, Sleepers, Ballast rail fixtures and fastenings,- Track Stress, coning of wheels creep in rails, defects in rails, Geometric design of railways, gradient, super elevation, widening of gauge on curves-Points and Crossings (Explanation & Sketches of Right and Left hand turnouts only)

Tunnels: Introduction size and shape of the tunnel, tunnelling methods in soils, tunnel lining, tunnel drainage and ventilation

## Part-C: DOCKS, HARBORS AND AIRPORTS

Docks & Harbors: Types of harbours, tides, wind and waves, break waters, docks, quays, Transit sheds, warehouses, navigational aids Airports; Introduction to airport planning and development, Runway Design; Orientation, Wind Rose Diagram, Runway length, Problems on basic and Actual Length, Geometric design of runways, Configuration and Pavement Design Principles,  Elements of Taxiway Design, Airport Zones, Passenger Facilities and Services, Runway and Taxiway Markings and lighting.

# Paper-II

## Part-A: SOLID MECHANICS

Force Systems, Resultant of coplanar force system, Equilibrium of coplanar force system, Analysis of trusses, friction, centroid and Moment of Inertia of Plane areas, Simple stresses and strains, Principal stresses and Mohr’s circle, Elastic Failure theories, Bending moment and shear force, Bending and Shear Stresses in beams, Torsion of circular shafts, Columns and struts.

## Part-B:STRUCTURAL ANALYSIS

Static and kinematic indeterminacy, Deflection of beams by Moment area method, conjugate beam method strain energy method and unit load method, Rolling loads and influence lines for statically determinate beams and trusses.  Two and Three hinged arches, cables and suspension bridges, Analysis of beams and frames; Consistent deformation method, Slope-deflection method, Moment distribution method & Kani’s method; Analysis of beams, frames and trusses by Matrix methods; Plastic analysis of beams and frames.

## Part-C: DESIGN OF RCC, PSC AND MASONRY STRUCTURES;

RCC:Principles of Limit state design of RC structures, Flexure and serviceability limit states, Design of beams, Slabs, Lintels, staircases, Columns, Footings, Retaining walls and water Tanks, Principles of earth quake resistant design.

PSC: Materials, Basic Principles of prestressing Analysis for flexure, Losses of prestress, Short term and Long term defelctions. Limit state of collapse, Design of Beams and End blocks.

Masonary Structures:Mansonry units, materials, strength and stability aspects, Design considerations. Design of masonry walls subjected to axial concentric and eccentric loads, Design of Laterally and transversely loaded masonry walls.

## Paper-III

## Part-A: CONSTRUCTION MATERIALS

Stone, Brick, Glass, Plastics, Steel, FRP, Ceramics, Aluminium, Timber; Aggregates Classification, properties and selection criteria; Cement; Types. Composition Properties, Uses, Specifications and various Tests; Lime & Cement Mortars and concrete Properties and various Tests; Design of Concrete Mixes Proportioning of aggregates and methods of mix design: Chemical and mineral admixtures. Centring scaffolding, shuttering, paints and varnishes.

## Part-B: DESIGN OF STEEL STRUCTURES, CONSTRUCTION PRACTIES, PLANNING & MANAGEMENT

Design of Steel Structures: Principles of Limit state method. Bolted and welded connections. Design of tension and compression members, Slab base & Gusseted base beams and beam column connections, Girders Industrial roofs.

Construction Practice, Planning and Management: construction Planning Equipment, Site investigation and Management including Estimation with latest project management tools and network analysis for different Types of works; Analysis of Rates of various types of works: Tendering Process and contract Management, Quality control, Productivity, Operation Cost; Land acquisition; Labour safety and welfare.

## Part-C: SOIL MECHANICS AND FOUNDATION ENGINEERING

Soil Mechanics; Soil formation, Three phase system, Index properties of soils, Soil Classification, Hydraulics of soils, Stress distribution in soils, Soil compaction. One dimensional consolidation, Effective stress and pore water pressure, Shear strength of soils. Soil exploration, Earth pressure and its determination. Bearing capacity-Theoretical methods and In-situ tests. Stability of slopes by various approaches, Load carrying capacity of single and group of piles. Ground improvement techniques.

Foundation Engineering Loads for foundation design, Depth of foundation, proportioning of footings. Geotechnical land structural design of isolated, combined and raft foundations. Analysis of pile groups. Design of piles and pile cap.

## Paper - IV

## Part-A: SURVEYING

Introduction of Terminology, Basic Principles of Surveying , Measurement of horizontal distances, Chain Surveying; compass surveying; introduction to levelling, Reduction of levelling; Contouring; Plane table surveying, Theodolite surveying, Trigonometric levelling.
Tachometry. Curve setting Computation of area and volume electronic-Distance measurements. Hydro graphic surveying.

Modern Surveying: Principles and uses of Electronic Theodolite, EDM, total station and it accessories. Features of total Station, Principles of Remote Sensing (RS). Global Position System (GPS). Application of GPS, Maps, Global Information System (GIS) and its Application.

## Part-B; FLUID MECHANICS, HYDROLOGY & WATER RESOURCES ENGINEERING

Fluid Mechanics: Introduction and Terminology, Basic properties of fluids. Pressure and its Hydrostatic pressure on surfaces, Kinematics of fluid flow, Dynamics of fluid flow, Velocity and Accelerations, Stream Lines, Equation of Continuity, Bernoulli's Equation, Irrotational and Rotational Flow, Velocity Potential and Stream Functions. Continuity Momentum and Energy Equation Naiver Stokes Equation, Euler's Equation

of Motion. Application to Fluid Flow Problems. Pipe Flow Darcy's Equation, Losses, Water hammer, Depth, velocity and Discharge measurements.
Uniform flow in open channels, Non uniform flow, Critical flow, rapid and gradually varied flow and its concept and Design Hydraulic jump.
Centrifugal Pumps and turbines.

Hydrology & Water Resources Engineering: Hydrologic cycle, Water budget, Catchment Precipitation types, measurement, intensity duration temporal and spatial analysis. In filtration, soil moisture, evaporation, transpiration, Groundwater Runoff components, factors, hydrographs, unit hydrograph, flood estimation.

## Part-C: ENVIRONMENTAL ENGINEERING

Essentials of water and waste water engineering systems, quantities, sources, water distribution systems, planning and analysis. Waste water collection. House drainage, Water and waste water characteristics. Drinking water standards. Unit operation and processes of water and waste water treatment. Design of treatment units.

Water, Air and Noise Pollution:Effluent standards Disposal of wastewater Stream sanitation. Water quality indices; Solid waste management Characteristics, treatment disposal; Air Pollution Control: sources and Characteristics, effects, Control; Noise Pollution control, measurement & analysis; Hazardous solid waste; classified wastes, Disposal of Hospital wastes: EIA Introduction case studies.

**ವಿಶೇಷ ಸೂಚನೆ:-**

1. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್/ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ.
2. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳುವುದು.
3. ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಮಾಹಿತಿಯನ್ನು ಆಯೋಗದ ವೆಬ್ ಸೈಟ್ ನಲ್ಲಿ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು.

**ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

## 8. ಮೀಸಲಾತಿ /ಇತರೆ ಪ್ರಮಾಣ ಪತ್ರಗಳು:-

| | | |
|---|---|---|
| 8.1<br>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು | (ಅ) | ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :-<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಡಿ'<br>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಇ<br>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು — ನಮೂನೆ `ಎಫ್' |
| | (ಆ) | *ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ-2ರಲ್ಲಿ ತೋರಿಸಲಾಗಿದೆ.<br>ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ),ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ(Government Notification No SWD 155 BCA 2012 Dt: 17-02-2012 ರನ್ವಯ). ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. |
| | (ಇ) | ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳುಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ಚಾಲ್ತಿ ಅವಧಿ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011ದಿನಾಂಕ 22-02-2012). |
| 8.2<br>ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | (ಆ) | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ.<br>ಮುಂದುವರೆದು, ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು .<br>(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ-2ರಲ್ಲಿ ತೋರಿಸಲಾಗಿದೆ). ನಮೂನೆ-1 ರಲ್ಲಿ ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಹಾಗೂ ಅಭ್ಯರ್ಥಿಗಳು ತಮಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು. |
| | (ಇ) | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ,2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನುನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ |

| | | |
|---|---|---|
| | | ಪಡೆದಿಟ್ಟುಕೊಂಡು ಅಪ್ಲೋಡ್ ಮಾಡತಕ್ಕದ್ದು.<br>(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ-2ರಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| 8.3<br>ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು.<br>(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ-2ರಲ್ಲಿ ತೋರಿಸಲಾಗಿದೆ). |
| 8.4<br>ಮಾಜಿ ಸೈನಿಕರಿಗೆ ಮೀಸಲಾತಿ | (ಅ) | ಮಾಜಿ ಸೈನಿಕ ಮೀಸಲಾತಿಯನ್ನುಕೋರುವ ಅಭ್ಯರ್ಥಿಗಳು ಈ ಸಂಬಂಧ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು.<br>(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ)ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು<br>ವಿವರಣೆ :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ |

| | | |
|---|---|---|
| | | ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಅರ್ಜಿ ಸಲ್ಲಿಸುವಾಗ ಪಡೆದಿಟ್ಟುಕೊಂಡು ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಇದೇ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. |
| | (ಆ) | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | (ಇ) | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು (ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. |
| | (ಈ) | 4) ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| 8.5<br>ಅಂಗವಿಕಲ ಅಭ್ಯರ್ಥಿ | | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ ಆರ್ ಆರ್ 2020 ದಿನಾಂಕ 25-09-2020ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-`ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ಅನುಬಂಧ-2ರಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>• ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇನೆನಿ 2013 ದಿನಾಂಕ:11-02-2021 |

| | | |
|---|---|---|
| | | ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ-3 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು. ತಾವೇ ಸ್ವತ: ಲಿಪಿಕಾರರನ್ನು ಕರೆತರಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ-3 ಮತ್ತು ಅನುಬಂಧ-4ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಯ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು. (ಸದರಿ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ).<br>• ಅಭ್ಯರ್ಥಿಗಳು ಲಿಪಿಕಾರರ ಸೇವೆಯನ್ನು ಒದಗಿಸುವಂತೆ ಆಯ್ಕೆಪ್ರಾಧಿಕಾರ/ ಆಯೋಗವನ್ನು ಕೋರಿದ್ದಲ್ಲಿ ಅವಶ್ಯಕತೆಯ ಅನುಸಾರ ಲಿಪಿಕಾರರನ್ನು ಒದಗಿಸಲು ವ್ಯವಸ್ಥೆ ಮಾಡುವಂತೆ ಸಂಬಂಧಿತ ಜಿಲ್ಲೆಯ ಜಿಲ್ಲಾಧಿಕಾರಿಗಳು/ಅಪರ ಜಿಲ್ಲಾಧಿಕಾರಿಗಳು/ಪರೀಕ್ಷಾ ಉಪ ಕೇಂದ್ರದ ಮುಖ್ಯಸ್ಥರನ್ನು ಕೋರಲಾಗುವುದು.<br>• ಅಭ್ಯರ್ಥಿಗಳ ಕೋರಿಕೆಯ ಅವಶ್ಯಕತೆಯ ಅನುಸಾರ Large Font Size ಪ್ರಶ್ನೆಪತ್ರಿಕೆಗಳನ್ನು ಆಯೋಗದಿಂದ ಒದಗಿಸಲಾಗುವುದು.<br>• ಪರೀಕ್ಷಾ ದಿನದಂದು ಪರೀಕ್ಷೆಯ ಪ್ರಾರಂಭಕ್ಕೆ ಮುಂಚೆ ಗೊಂದಲ ಮತ್ತು ವಿಚಲತೆಯನ್ನು ತಪ್ಪಿಸಲು ನೆಲಮಹಡಿಯಲ್ಲಿ ಪ್ರಾಶಸ್ತ್ಯ ಕೊಟ್ಟು ಸರಿಯಾದ ಆಸನ/ವೀಲ್ ಚೇರ್ ವ್ಯವಸ್ಥೆಯನ್ನು ಕಲ್ಪಿಸುವಂತೆ ಸಂಬಂಧಿತ ಪರೀಕ್ಷಾ ಉಪಕೇಂದ್ರದ ಮುಖ್ಯಸ್ಥರನ್ನು ಕೋರಲಾಗುವುದು. |
| (9) ಸೇವಾ ನಿರತ ಅಭ್ಯರ್ಥಿ<br><br>ಸೇವಾ ಪ್ರಮಾಣ ಪತ್ರ | | ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 19 ಎಸ್ ಆರ್ ಆರ್ 2020, ದಿನಾಂಕ: 12-10-2020ರ ಪ್ರಕಾರ ಅಭ್ಯರ್ಥಿಯು ಆತನ ಆಯ್ಕೆ ಅಧಿಸೂಚನೆಗೊಂಡ ಕೂಡಲೇ ಆದರೆ ಅವನಿಗೆ ನೇಮಕಾತಿ ಆದೇಶ ಹೊರಡಿಸುವ ಮುನ್ನ ನಿರಾಕ್ಷೇಪಣಾ ಪತ್ರವನ್ನು ನೇಮಕಾತಿ ಮಾಡಲು ಸಕ್ಷಮವಾದ ಪ್ರಾಧಿಕಾರಕ್ಕೆ ಹಾಜರುಪಡಿಸಬೇಕಾಗಿರುತ್ತದೆ.<br>ಸರ್ಕಾರಿ ಸೇವೆಯಲ್ಲಿರುವ ನೌಕರರು ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ ಅಂತಹ ನೌಕರರು ಸೇವಾ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸುವುದು. ತಪ್ಪಿದ್ದಲ್ಲಿ ಈ ಸೌಲಭ್ಯವು ದೊರೆಯುವುದಿಲ್ಲ. |

ವಿಶೇಷ ಸೂಚನೆಗಳು :-

1) ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿ(valid)ಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಅಂತವರ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ.
2) ಅಧಿಸೂಚನೆಯನ್ವಯ ಚಾಲ್ತಿಯಲ್ಲಿರದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
3) ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸದರಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ

ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಭ್ಯರ್ಥಿತನವನ್ನು ತಿರಸ್ಕರಿಸಲಾಗುವುದು.

4) ಮೇಲ್ಕಂಡ ಎಲ್ಲಾ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

5) ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

## 9. ಆಯೋಗದೊಡನೆ ಪತ್ರ ವ್ಯವಹಾರ:-

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳನ್ನು ಒದಗಿಸತಕ್ಕದ್ದು:-

(i) ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

## 10. ಪ್ರಾಮುಖ್ಯವಾದ ಸೂಚನೆಗಳು:

| |
|---|
| ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು. ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. |
| 1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ. |
| 2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record). |
| 3) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ/ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ (Dependant certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ). |
| 4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮಿಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.(ಮೀಸಲಾತಿ ಕೋರಿದ್ದಲ್ಲಿ) |
| 5) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ / ಇತರೆ ಅಭ್ಯರ್ಥಿಗಳು ನಮೂನೆ- 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ) |
| 6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 7) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 8) ಪರೀಕ್ಷೆ ಬರೆಯಲು ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ / ಲಿಪಿಕಾರರ ಸೇವೆ ಪಡೆಯಲು ಅನುಬಂಧ 3 & 4 |
| 9) ಫೋಟೋ ಮತ್ತು ಸಹಿಯನ್ನು /ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಪೂರ್ಣವಾಗಿರುವ ದಾಖಲೆಗಳನ್ನು |

| |
|---|
| ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 10) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. |
| 11) ಸದರಿ ನೇಮಕಾತಿ ಸಂಬಂಧ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯೋಗವು ನಡೆಸುವ ಯಾವುದೇ ನೇಮಕಾತಿ/ಪರೀಕ್ಷೆಗಳಿಂದ 03 ವರ್ಷಕ್ಕೆ ಡಿಬಾರ್ ಮಾಡಲಾಗುವುದು. ಆದುದರಿಂದ, ಅರ್ಜಿ ಸಲ್ಲಿಸುವ ಮುನ್ನ ಅವರು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರವಹಿಸಬೇಕು. |

**ವಿಶೇಷ ಸೂಚನೆ: ಈ ಅಧಿಸೂಚನೆಯು ಜಾರಿಯಾದ ಮೇಲೆ ಈ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರವು ಯಾವುದೇ ನಿಯಮಗಳು ಮತ್ತು ನಿರ್ದೇಶನಗಳನ್ನು ಜಾರಿ ಮಾಡಿದಲ್ಲಿ/ತಿದ್ದುಪಡಿ ಮಾಡಿದಲ್ಲಿ/ಪರಿಷ್ಕರಿಸಿದಲ್ಲಿ ಅವುಗಳನ್ನು ನೇಮಕಾತಿ ಪ್ರಕ್ರಿಯೆಯ ಸಮುಚಿತ ಹಂತದಲ್ಲಿ ಸೇರಿಸಿಕೊಳ್ಳಲಾಗುವುದು.**

11 ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080-30574957/ 30574901 |
| ಪರೀಕ್ಷಾಶಾಖೆ-1 | : | 080-30574935 |

- ಅಭ್ಯರ್ಥಿಗಳು ಅವರ Login ನಲ್ಲಿ Helpdesk Module ಮುಖಾಂತರ ಅರ್ಜಿಗೆ ಸಂಬಂಧಿಸಿದಂತೆ ತೊಂದರೆಗಳು ಎದುರಾದಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ.

12. ದುರ್ನಡತೆ:-

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಆಯೋಗದ ಅನುಮೋದನೆ ಮೇರೆಗೆ

ಸಹಿ/-

**(ಡಾ. ರಾಕೇಶ್ ಕುಮಾರ್ ಕೆ.)**

ಕಾರ್ಯದರ್ಶಿ,

ಕರ್ನಾಟಕ ಲೋಕಸೇವಾ ಆಯೋಗ.

**ಅನುಬಂಧ-1**

**ನಮೂನೆಗಳು**

**ನಮೂನೆ - ಡಿ**

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

(ನಿಯಮ 3ಎ (2) (3) ನೋಡಿ)ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ ............................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ............................ ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ..................................ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

¨ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬು ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

¨ ಸಂವಿಧಾನ

¨ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

¨ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

¨ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

¨ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

¨ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988

¨ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ....................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ............................................................ಜಿಲ್ಲಾ / ವಿಭಾಗದ .......................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ........................................................

ತಹಶೀಲ್ದಾರ್............................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76-ಎಸ್‌ಸಿಟಿ-1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರ ತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ - ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

…………………………………………………………………………………………………………………… ……………………………………………ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ………………………………………………………………… ………………………………………… …… ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ…………………………………………………………………………………………………………ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ……………………………………ಜಾತಿಯ …………………………………ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ : ……………………………ತಾಲ್ಲೂಕು

ಕಛೇರಿಯ ಮೊಹರು

**(ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ - ಎಫ್**

**(ನಿಯಮ 3ಎ (2) (3)ನ್ನು ನೋಡಿ)**

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ ………………………………………… ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ………………………………………………………… ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ……………………………………………… ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100-83900/-) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ /ಆಕೆಯ ತಂದೆ ತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017 ಬೆಂಗಳೂರು, ದಿ: 14-09-2018);ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ……………………………………………ಇವರು ………………………………………… ಜಾತಿಗೆ …………………………………………………………… ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ …………………………… (2ಎ, 2ಬಿ, 3ಎ, 3ಬಿ) ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ:(ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ತಹಶೀಲ್ದಾರ್

ದಿನಾಂಕ:

……………………ತಾಲ್ಲೂಕು

ಕಛೇರಿಯ ಮೊಹರು

## ನಮೂನೆ - 1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು

ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು

……………………………………………ತಾಲ್ಲೂಕು

…………………………………………… ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ …………………………………………………………………………………… ಎಂಬುವವರ ಮಗ / ಮಗಳು / ಪತಿ / ಪತ್ನಿ ……………………………………………………………….. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು

ಪ್ರಾಥಮಿಕ :

ಮಾಧ್ಯಮಿಕ :

ಪ್ರೌಢ :

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾಮೂಲಗಳಿಂದ:

1) ವೇತನ ಶ್ರೇಣಿ

2) ಜಮೀನಿನ ವಿವರ

3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1.ಶ್ರೀ/ಶ್ರೀಮತಿ .................................................................................... ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ..................................................... ಎಂಬುವವರು ಕರ್ನಾಟಕ ರಾಜ್ಯದ ..............................ಜಿಲ್ಲೆಯ ವಿಭಾಗ ...................................................... ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ............................................................. ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ ತಹಶೀಲ್ದಾರ್.

............................... ತಾಲ್ಲೂಕು,

ಬೆಂಗಳೂರು ಕಛೇರಿಯ ಮೊಹರು

ಸೂಚನೆ-1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ-2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು

## ನಮೂನೆ – 2

### ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ………………………………………………………………………………ರವರ ಮಗ/ ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ…………………………………………………………………… ಜಿಲ್ಲೆ ………………………ತಾಲ್ಲೂಕು…………………………… ಗ್ರಾಮದಲ್ಲಿ ……………………………… ವಾಸವಾಗಿರುವ ಇವರು ಒಂದನೇ ತರಗತಿಯಿಂದ ……………………………… ತರಗತಿಯವರೆಗೆ …………………………… ಜಿಲ್ಲೆ ……………………………………… ತಾಲ್ಲೂಕು……………………… ಪಟ್ಟಣ…………………… ಶಾಲೆಯಲ್ಲಿ ವ್ಯಾಸಂಗ ಮಾಡಿ ……………… ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಸಹಿ
ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ :
ದಿನಾಂಕ :

---

### ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ…………………………………………………ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ………………………………………………………… ಜಿಲ್ಲೆ ……………………………………ತಾಲ್ಲೂಕು ……………………………………………ಗ್ರಾಮದಲ್ಲಿ ವಾಸವಾಗಿರುವ ಇವರು ……………………ನೇ ತರಗತಿಂದ ……………………………………ನೇ ತರಗತಿಯವರೆಗೆ ……………………………… ಶೈಕ್ಷಣಿಕ ವರ್ಷದಿಂದ ……………………… ಶೈಕ್ಷಣಿಕ ವರ್ಷದವರೆಗೆ ……………………………ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

GOVERNMENT OF KARNATAKA

DEPARTMENT OF SAINIK WELFARE AND RESETTLEMENT
Office of the Deputy Director Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Ssmt/Kum..................................................is an applicant for ................................in Karnataka is the spouse/son/daughter of No......................Rank...........

Name ......................................................who died/was permanently disabled while in service according to the certificate issued by Defense Authority. He died/was permanently disabled on .....................

Home address of the individual at the time of joining Defense Service as per the records is:

....................................................................

........................................................................

Place: Signature of the Deputy Director
Date: Department of Sainik Welfare & Resettlement

District ....................................

ಅನುಬಂಧ-2

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………… son/ wife / daughter of Shri …………………………………………..Age ……………… old, male / female, Registration No …………………………… is a case of ………………………... He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

Note :

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ……………… months/years. *

* Strike out which is not applicable

(Recent Attested Photograph
showing the disability affixed here)

| Sd/- | Sd/- | Sd/- |
|---|---|---|
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impressionof the disabled person

Explanation:-As per Notification No. DPAR 50 SRR 2000 dated 03-09-2005 " Physically Handicapped candidates " or " person with disability " means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.

(1)Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device; (3) Hearing impairment means loss of sixty decibels or more in the better ear in the conversational range of frequencies.(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion " Leprosy cured " shall be construed accordingly; (6) Mental Retardation:-means a condition of arrested or incomplete development of mind of a person who is specially characterised by sub normality of intelligence; (7) Mental Illness:- means any mental disorder other than mental retardation.

**ಅನುಬಂಧ-3**

**(ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 272ಸೇನೆನಿ2013 ದಿನಾಂಕ:11.02.2021ರ ಕಂಡಿಕೆ 5 ರಂತೆ )**

**(ಅಭ್ಯರ್ಥಿಯು ಬರೆಯಲು ದೈಹಿಕ ಅಸಮರ್ಥ್ಯತೆ ಹೊಂದಿರುವ ಬಗ್ಗೆ ಪ್ರಮಾಣ ಪತ್ರ)**

(ದೃಷ್ಠಿ ಮಾಂದ್ಯತೆ, ಚಲನವಲನ ವೈಕಲ್ಯ (ಎರಡೂ ತೋಳುಗಳ ಪೀಡಿತ ಗೊಂಡಂತಹ-BA )ಮತ್ತು ಮೆದುಳಿನ ಪಾರ್ಶ್ವವಾಯು- ಈ ಎದ್ದುಕಾಣುವ ಅಂಗವೀಕಲತೆಯನ್ನು ಹೊಂದಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ)

ಈ ವೈದ್ಯಕೀಯ ಮಂಡಳಿಯು, ………………………………(ಅಂಗವೈಕಲ್ಯ ಪ್ರಮಾಣ ಪತ್ರದಲ್ಲಿ ದಾಖಲಿಸಲಾಗಿರುವ ಅಂಗವೈಕಲ್ಯತೆಯ ಸ್ವರೂಪ ಮತ್ತು ಪ್ರತಿಶತ ಪ್ರಮಾಣ) ಅಂಗವೈಕಲ್ಯವನ್ನು ಹೊಂದಿರುವ ಶ್ರೀ/ಶ್ರೀಮತಿ/ಕುಮಾರಿ………………………(ಅಂಗವಿಕಲ ಅಭ್ಯರ್ಥಿಯ ಹೆಸರು) ……………………………… ಇವರ ಮಗ/ಮಗಳು……………………………… (ಗ್ರಾಮ. ತಾಲ್ಲೂಕು, ಜಿಲ್ಲೆ) ಇಲ್ಲಿನ ನಿವಾಸಿ, ಇವರನ್ನು ಪರೀಕ್ಷಿಸಿದ್ದು, ಇವರ ಅಂಗವೈಕಲ್ಯತೆಯು ಇವರ ಬರವಣಿಗೆ ಸಾಮರ್ಥ್ಯವನ್ನು ಕುಂಠಿತಗೊಳಿಸುವ ದೈಹಿಕ ಅಸಮರ್ಥತೆಯಾಗಿದೆ ಎಂದು ಪ್ರಮಾಣೀಕರಿಸುತ್ತದೆ.

(ಸಹಿ)

ಅಧ್ಯಕ್ಷರು ಮತ್ತು ಸದಸ್ಯರು, ವೈದ್ಯಕೀಯ ಮಂಡಳಿ.

ಸ್ಥಳ:

ದಿನಾಂಕ:

ಟಿಪ್ಪಣಿ:

1. ವೈದ್ಯಕೀಯ ಮಂಡಳಿಯ ಸ್ಥಳ ವಿವರಗಳೊಂದಿಗೆ, ಮಂಡಳಿಯ ಅಧ್ಯಕ್ಷರು ಮತ್ತು ಸದಸ್ಯರ ಹೆಸರು ಮತ್ತು ಹುದ್ದೆಗಳನ್ನು ಸ್ಪಷ್ಟವಾಗಿ ನಮೂದಿಸಬೇಕು.
2. ಅಭ್ಯರ್ಥಿಯು ಹೊಂದಿರುವ ಅಂಗವೈಕಲ್ಯಕ್ಕೆ ಸಂಬಂಧಿಸಿದ ತಜ್ಞವೈದ್ಯರೊಬ್ಬರು ಆಯಾಯಾ ಮಂಡಳಿಯ ಸದಸ್ಯರಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

## ಅನುಬಂಧ-4

(ಸರ್ಕಾರಿ ಆದೇಶ ಸಂಖ್ಯೆ.ಸಿ ಆ ಸು ಇ 272 ಸೇನೆನಿ 2013 ದಿನಾಂಕ:11-02-2021ರ ಕಂಡಿಕೆ 5 ರಂತೆ)

ತನ್ನದೇಯಾದ ಲಿಪಿಕಾರನ ಸೇವೆಯನ್ನು ಪಡೆಯಲು ಮುಚ್ಚಳಿಕೆ ಪತ್ರ

(ಮುಚ್ಚಳಿಕೆ ಪತ್ರವನ್ನು ಈ ಕೆಳಗೆ ನಮೂದಿಸಿರುವ ನಮೂನೆಯಲ್ಲೇ ಪಡೆಯತಕ್ಕದ್ದು)

ಶ್ರೀ/ಶ್ರೀಮತಿ....................................... ಆದ ನಾನು ........................... (ಅಂಗ ವೈಕಲ್ಯದ ಹೆಸರು) ಅಂಗವೈಕಲ್ಯವನ್ನು ಹೊಂದಿದ್ದು, ........................ (ಪರೀಕ್ಷೆಯ ಹೆಸರು) ಪರೀಕ್ಷೆಗೆ ....................................ಕ್ರಮ ಸಂಖ್ಯೆಯಲ್ಲಿ .................................... (ಸ್ಥಳ, ತಾಲ್ಲೂಕು, ಜಿಲ್ಲೆ) ಸ್ಥಳದಲ್ಲಿನ .............................. ಕೇಂದ್ರದಲ್ಲಿ ಹಾಜರಾಗಿದ್ದೇನೆ.ನಾನು ....................................... ವಿದ್ಯಾರ್ಹತೆಯನ್ನು ಹೊಂದಿರುತ್ತೇನೆ.

ಈ ಕೆಳಗೆ ಸಹಿ ಮಾಡಿರುವ ನನಗೆ ಶ್ರೀ/ಶ್ರೀಮತಿ/ಕುಮಾರಿ ...........................................(ಲಿಪಿಕಾರನ ಹೆಸರು) ಇವರು ಮೇಲೆ ತಿಳಿಸಲಾದ ಪರೀಕ್ಷೆಯಲ್ಲಿ ಲಿಪಿಕಾರನ ಸೇವೆಯನ್ನು ಒದಗಿಸಿರುತ್ತಾರೆ ಎಂದು ನಾನು ಈ ಮೂಲಕ ತಿಳಿಸುತ್ತೇನೆ.

ಲಿಪಿಕಾರನ ವಿದ್ಯಾರ್ಹತೆಯು .................................... ಎಂದು ನಾನು ಈ ಮೂಲಕ ದೃಢೀಕರಿಸಿ, ಮುಚ್ಚಳಿಕೆ ನೀಡುತ್ತೇನೆ. ಒಂದು ವೇಳೆ ಲಿಪಿಕಾರನ ವಿದ್ಯಾರ್ಹತೆಯು ಮೇಲೆ ತಿಳಿಸಲಾದ ವಿದ್ಯಾರ್ಹತೆಗಿಂತ ಹೆಚ್ಚಾಗಿರುವುದು ಹಾಗೂ ಸರ್ಕಾರಿ ಆದೇಶ ಸಂಖ್ಯೆ.ಸಿಆಸುಇ 272 ಸೇನೆನಿ 2013, ದಿನಾಂಕ:11-02-2021 ಆದೇಶ ಭಾಗದ ಕಂಡಿಕೆ-04 ಉಪಕಂಡಿಕೆ 07 ರಲ್ಲಿ ನಿಗದಿಪಡಿಸಿರುವುದಕ್ಕೆ ಒಳಪಡದಿರುವುದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ, ನಾನು ಈ ಪರೀಕ್ಷೆಯಲ್ಲಿ ಉತ್ತೀರ್ಣವಾದಲ್ಲಿ ಪಡೆಯಬಹುದಾದ ಹುದ್ದೆ ಮತ್ತು ಸಂಬಂಧಿಸಿದ ಎಲ್ಲಾ ಹಕ್ಕುಗಳು ನನ್ನಿಂದ ಮುಟ್ಟುಗೋಲು ಹಾಕಿಕೊಳ್ಳಲ್ಪಡುತ್ತವೆ ಎಂಬುದನ್ನು ಸ್ಪಷ್ಟವಾಗಿ ಅರಿತಿರುತ್ತೇನೆ ಹಾಗೂ ಈ ಷರತ್ತಿಗೆ ಸಂಪೂರ್ಣವಾಗಿ ಬದ್ಧನಾಗಿರುತ್ತೇನೆ.

(ಅಭ್ಯರ್ಥಿಯ ಪ್ರವೇಶ ಪತ್ರದ ಪ್ರತಿ, ಗುರುತಿನ ಚೀಟಿ ಮತ್ತು ವೈದ್ಯಕೀಯ ಪ್ರಮಾಣ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸತಕ್ಕದ್ದು)

ಸ್ಥಳ: (ಅಂಗವಿಕಲ ಅಭ್ಯರ್ಥಿಯ ಸಹಿ)

ದಿನಾಂಕ:

* * * *